ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೆರಡನೆಯ ಅಧಿವೇಶನ
ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ರಾಜ್ಯದಲ್ಲಿ ಹೊಸ ಕೈಗಾರಿಕಾ ನೀತಿ ಜಾರಿಗೆ ತಂದಿರುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

681 (763) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದಲ್ಲಿ ಹೊಸ ಕೈಗಾರಿಕಾ ನೀತಿಯನ್ನು ತಂದಿದ್ದು, ಇದರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರ ಯಾವ ಮಾನದಂಡಗಳನ್ನು ಹಮ್ಮಿಕೊಳ್ಳಲಾಗಿದೆ;

(ಆ) ಕೋವಿಡ್-19ರ ಪರಿಣಾಮವಾಗಿ ಸರ್ಕಾರ ಲಾಕ್‌ಡೌನ್ ವಿಧಿಸಿದ್ದರಿಂದ ಹಲವಾರು ಉದ್ಯಮಗಳು ನಷ್ಟ ಅನುಭವಿಸಿದ್ದು, ಅವುಗಳು ಪುನರಾರಂಭಗೊಳ್ಳುವುದೇ ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇಂತಹ ರೋಗಪೀಡಿತ ಉದ್ಯಮಗಳಿಂದ ಇದಕ್ಕೆ ಸಂಬಂಧಿಸಿದ ಇತರ ಉದ್ದಿಮೆಗಳು ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇಂತಹ ರೋಗಪೀಡಿತ ಉದ್ದಿಮೆಗಳಿಂದ (Sick Industries) ಉದ್ಯಮ ಹಾಗೂ ಉದ್ಯೋಗೀಕರಣದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವುದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು?